ಅ) ಸತತವಾಗಿ ೬ ವರ್ಷಗಳ ಕಾಲ ರಾಜ್ಯದ ವಿವಿಧ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಅರೆಕಾಲಿಕ ಉಪನ್ಯಾಸಕರಾಗಿ ಕೆಲಸ ನಿರ್ವಹಿಸುತ್ತಿರುವವರ ಸಂಖ್ಯೆ ಎಷ್ಟು?

ಆ) ಸರ್ಕಾರದವರು ಇವರ ಸೇವೆಯನ್ನು ಖಾಯಂಗೊಳಿಸದೇ ಇರಲು ಕಾರಣವೇನು?

ಇ) ಸುಪ್ರೀಂ ಕೋರ್ಟು ಸೂಚನೆ ಪ್ರಕಾರ ಈ ಅರೆಕಾಲಿಕ ಉಪನ್ಯಾಸಕರನ್ನು ಖಾಯಂಗೊಳಿಸಲು ಸರ್ಕಾರವು ಕೈಗೊಂಡಿರುವ ಕ್ರಮಗಳೇನು?

ಡಾ: ಜಿ.ಪರಮೇಶ್ವರ: (ಉನ್ನತ ಶಿಕ್ಷಣ, ವಿಜ್ಞಾನ ಮತ್ತು ತಂತ್ರಜ್ಞಾನ ರಾಜ್ಯ ಸಚಿವರು):

ಅ) ಪ್ರಸ್ತುತ ೧೧೨೮ ಅರೆಕಾಲಿಕ ಉಪನ್ಯಾಸಕರು ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಸೇವೆ ಸಲ್ಲಿಸುತ್ತಿದ್ದಾರೆ.

ಆ ಮತ್ತು ಇ) ಅರೆಕಾಲಿಕ ಉಪನ್ಯಾಸಕರನ್ನು ಸೇವಾ ಸಕ್ರಮಗೊಳಿಸಲು ಸರ್ಕಾರ ನಿರ್ಧಾರ ತೆಗೆದುಕೊಂಡು ಅಧಿಸೂಚನೆ ಸಂ.ಡಿಪಿಎಆರ್-೪೮-ಎಸ್‌ಆರ್‌ಇ-೯೬ ದಿ:೨೨-೧-೯೭ರಲ್ಲಿ ವಿಶೇಷ ನೇಮಕಾತಿ ನಿಯಮಗಳನ್ನು ರೂಪಿಸಿತ್ತು. ಆದರೆ, ಕೆಲವು ಮುಕ್ತ ಅಭ್ಯರ್ಥಿಗಳು ಈ ಬಗ್ಗೆ ಕರ್ನಾಟಕ ಆಡಳಿತ ನ್ಯಾಯ ಮಂಡಳಿ ಹಾಗೂ ಸರ್ವೋಚ್ಚ ನ್ಯಾಯಾಲಯದಲ್ಲಿ ಪ್ರಶ್ನಿಸಲಾಗಿ, ಅವುಗಳು ಈ ನಿಯಮಗಳನ್ನು ಅನೂರ್ಜಿತಗೊಳಿಸಿದ್ದು ಇದರ ವಿರುದ್ಧ ಭಾರತ ಸರ್ವೋಚ್ಚ ನ್ಯಾಯಾಲಯದಲ್ಲಿ ಸರ್ಕಾರವು ವಿಶೇಷ ರಜಾ ಅರ್ಜಿಯನ್ನು ಸಲ್ಲಿಸಿದ್ದು (ಸಿಸಿ ೫೩೬೬೧ : ೯೯) ಅದನ್ನು ಸಹ ಭಾರತ ಸರ್ವೋಚ್ಚ ನ್ಯಾಯಾಲಯವು ತನ್ನ ದಿ: ೧೪-೧೦-೯೯ರ ತೀರ್ಪಿನ ಅನ್ವಯ ವಜಾಗೊಳಿಸಿತ್ತು. ತತ್ಸಬಂಧ ಭಾರತ ಸರ್ವೋಚ್ಚ ನ್ಯಾಯಾಲಯ ಈ ಪ್ರಕರಣವನ್ನು ಪುನಃ ಪರಿಶೀಲಿಸಿ ರಾಜ್ಯ ಸರ್ಕಾರವು ರೂಪಿಸಿರುವ ನಿಯಮಾವಳಿಗಳನ್ನು ಕೆಲವು ಷರತ್ತಿಗೊಳಪಟ್ಟು ತನ್ನ ದಿನಾಂಕ ೩-೧-೨೦೦೧ರ ತೀರ್ಪಿನಲ್ಲಿ ಎತ್ತಿ ಹಿಡಿದಿದೆ. ತೀರ್ಪನ್ನು ಅನುಷ್ಠಾನಗೊಳಿಸಲು ಸೂಕ್ತ ಕ್ರಮ ಜರುಗಿಸಲಾಗುತ್ತಿದೆ.

ನರ್ಸಿಂಗ್ ಶಾಲೆಗಳಲ್ಲಿ ಸರ್ಕಾರಿ ಆಸ್ಪತ್ರೆಯಲ್ಲಿ ಕ್ಲಿನಿಕಲ್ ಸೌಲಭ್ಯ ನೀಡುತ್ತಿರುವುದು.

೧೪೦೭(೧೬೨೦)

ಶ್ರೀ ಕಟ್ಟಾ ಸುಬ್ರಹ್ಮಣ್ಯ ನಾಯ್ಡು(ಶಿವಾಜಿನಗರ): ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ಎಷ್ಟು ನರ್ಸಿಂಗ್ ಶಾಲೆಗಳು ಹಾಗೂ ಸರ್ಕಾರಿ ಆಸ್ಪತ್ರೆಗಳು ಕ್ಲಿನಿಕಲ್ ಸೌಲಭ್ಯವನ್ನು ಉಪಯೋಗಿಸಿಕೊಳ್ಳುತ್ತಿವೆ?

ಆ) ಇದರಿಂದ ಪ್ರತಿ ವರ್ಷ ಸರ್ಕಾರಕ್ಕೆ ಬರತಕ್ಕ ವರಮಾನವೆಷ್ಟು?

ಇ) ಕ್ಲಿನಿಕಲ್ ಸೌಲಭ್ಯವನ್ನು ಸರ್ಕಾರಿ ಆಸ್ಪತ್ರೆಗಳಲ್ಲಿ ನೀಡುತ್ತಿರುವುದರಿಂದ ಶುಶ್ರೂಷಕರಿಗೆ ಉತ್ತಮ ತರಬೇತಿ ಸಿಗಲು ಸಾಧ್ಯವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ?

ಈ) ನರ್ಸಿಂಗ್ ಶಾಲೆಗಳು ಸ್ವಂತ ಆಸ್ಪತ್ರೆಯನ್ನು ಹೊಂದುವುದು ಆರ್ಥಿಕ ಮುಗ್ಗಟ್ಟಿನಿಂದ ಸಾಧ್ಯವಾಗದೇ ಇರುವುದರಿಂದ, ಒಂದೇ ಬಾರಿಗೆ ಮೂರು ವರ್ಷಗಳ ಕಾಲ ಕ್ಲಿನಿಕಲ್ ಸೌಲಭ್ಯವನ್ನು ಮುಂದುವರಿಸಲು ಸರ್ಕಾರದವರು ಪರಿಶೀಲಿಸುವರೆ?

ಡಾ: ಎ.ಬಿ.ಮಾಲಕ ರೆಡ್ಡಿ: (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು):

ಅ) ೧೨೬

ಆ) ವಾರ್ಷಿಕ ರೂ.೧೨.೯೭ ಲಕ್ಷಗಳು.

ಇ) ಹೌದು.

ಈ) ಪ್ರಸ್ತುತ ಇಂತಹ ಯಾವುದೇ ಪ್ರಸ್ತಾವನೆಯನ್ನು ಪರಿಶೀಲಿಸುತ್ತಿಲ್ಲ.

ಅರೆಕಾಲಿಕ ಉಪನ್ಯಾಸಕರ ಖಾಯಂ.

೧೪೦೮(೧೬೮೦)

ಶ್ರೀ ಕಟ್ಟಾ ಸುಬ್ರಹ್ಮಣ್ಯ ನಾಯ್ಡು (ಶಿವಾಜಿನಗರ): ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿರುವ ಅರೆಕಾಲಿಕ ಉಪನ್ಯಾಸಕರ ಸಂಖ್ಯೆ ಎಷ್ಟು? ಪದವಿ ಮತ್ತು